**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ. 1356/2023**

ದಿನಾಂಕಃ **14.10.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಅನುಕುಮಾರ್ | ಚಾಸಾ-2, ಪ್ರಾಸ-1 |
| ತಂದೆಯ ಹೆಸರು | ಮಂಜಪ್ಪ | |
| ವಯಸ್ಸು | 35 ವರ್ಷ | |
| ಉದ್ಯೋಗ | ಕೂಲಿ | |
| ವಾಸ | ದೊಡ್ಡಪಟ್ಟಣಗೆರೆ | |

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-3 ನನಗೆ ಗೊತ್ತಿಲ್ಲ. ಆರೋಪಿತರು ನನಗೆ ಗೊತ್ತಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇಲ್ಲಾ. ನನಗೆ ಯಾವುದೇ ನೋಟಿಸು ಜಾರಿ ಮಾಡಿರುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ದಿಃ 15.03.2023 ರ ಪೋಲಿಸ್ ನೋಟಿಸಿನಲ್ಲಿ ತನ್ನ ಸಹಿ ನೋಡಿ ಗುರುಸಿತಿರುತ್ತಾರೆ. ಸದರಿ ನೋಟಿಸನ್ನು ನಿಪಿ-1 ರಲ್ಲಿರುವ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-2 ರಲ್ಲಿರುವ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಯಾವಾಗ ಮತ್ತು ಎಲ್ಲಿ ಹಾಕಿರುತ್ತೇನೆ ಎಂದು ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ತಿಳಿದಿಲ್ಲ. ಸಾಕ್ಷಿಗೆ ಮಹಜರ್ ಸಮಯದಲ್ಲಿ ತೆಗೆಯಲಾದ ಛಾಯಾಚಿತ್ರವನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ಗುರುತಿಸಿರುತ್ತಾರೆ. ಸದರಿ ಛಾಯಾಚಿತ್ರವನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ನ್ನು ಯಾವ ಸಮುದಲ್ಲಿ ತೆಗೆಯಲಾಯಿತು ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ

ಆರೋಪಿತರು ಮತ್ತು ಚಾಸಾ-1 ರವರ ನಡುವೆ ಆದ ಗಲಾಟೆಗೆ ಸಂಬಂಧಿಸಿದಂತೆ ಮಹಜರ್ ಕ್ರಮ ಜರುಗಿಸಲು ಕೋರಿ ನನಗೆ ಮತ್ತು ಚಾಸಾ-3 ರವರಿಗೆ ದಿಃ 15.01.2023 ರಂದು ನಿಪಿ-1 ರಂತೆ ನೋಟಿಸು ಜಾರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಬೆಳಗ್ಗೆ 11.00 ರಿಂದ 12.00 ರವರೆಗೆ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-2 ರಂತೆ ಮಹಜರ್

ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮುದಲ್ಲಿ ನಿಪಿ-3 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.